# ಅಭ್ಯರ್ಥಿಗಳಿಗೆ ಆನ್‌ಲೈನ್‌ಅರ್ಜಿ ಭರ್ತಿ ಮಾಡುವ ಬಗ್ಗೆ ಸೂಚನೆಗಳು

ಆನ್‌ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂದಲ್ಲ. ತದನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿಯಾಗಲೀ ನ್ಯೂನ್ಯತೆಗಳು ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಈ ಅರ್ಜಿಸಲ್ಲಿಸುವ ಪ್ರಕ್ರಿಯೆಯು ಒಂದು ಬಾರಿಯ ನೋಂದಣಿ ಪ್ರಕ್ರಿಯೆಯನ್ನು ಒಳಗೊಂಡಿದ್ದು, ಅತೀಜಾಗರುಕತೆಯಿಂದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಬೇಕಾಗಿದೆ. ಅಭ್ಯರ್ಥಿಗಳು ಸೂಚನೆಗಳನ್ನು ಹಂತ ಹಂತವಾಗಿ ಓದಿಕೊಳ್ಳತಕ್ಕದ್ದು. ಎಲ್ಲಾ ಸೂಚನೆಗಳನ್ನು ಓದಿದ ನಂತರವೇ ಅರ್ಜಿಯನ್ನು ಭರ್ತಿಮಾಡತಕ್ಕದ್ದು.

1. ಅಭ್ಯರ್ಥಿಗಳು ಬ್ಯಾಂಕಿನ ಅಂತರ್ಜಾಲದ ಮುಖಾಂತರವೇ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು. ಇತರೇ ಯಾವುದೇ ಮಾದರಿಯಲ್ಲಿ/ಮೂಲದ ಮುಖಾಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
2. ಅಭ್ಯರ್ಥಿಗಳು ಮೊದಲು ಬ್ಯಾಂಕಿನ ಅಂತರ್ಜಾಲ www.karnatakaapex.com ನಲ್ಲಿ ನೋಂದಣಿಯನ್ನು ಒತ್ತಿ ನೋಂದಣಿ ಮಾಡಿಕೊಳ್ಳಬೇಕು.
3. ಅಭ್ಯರ್ಥಿಗಳು ನೋಂದಣಿ ಮಾಡಿಕೊಳ್ಳಲು ಹಾಗೂ ಲಾಗ್‌ಇನ್ ರುಜುವಾತುಗಳಿಗೆ ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿರುವಂತೆ ಹೆಸರು, ಜನ್ಮ ದಿನಾಂಕ ಹಾಗೂ ಮೊಬೈಲ್ ಸಂಖ್ಯೆ ಮತ್ತು ಇ–ಮೇಲ್ ವಿಳಾಸದ ಮುಖಾಂತರ ಮಾಡಿಕೊಳ್ಳವುದು.
4. ನೋಂದಣಿ ಪ್ರಕ್ರಿಯೆಯು ಮುಗಿದ ನಂತರ ನೋಂದಣಿ ಸಂಖ್ಯೆ ದೊರೆಯುತ್ತದೆ. ನಂತರ ಕಂಪ್ಯೂಟರ್‌ನಲ್ಲಿ ನೀಡುವ ನೋಂದಣಿ ಸಂಖ್ಯೆಯನ್ನು ತಪ್ಪದೇ ಬರೆದಿಟ್ಟುಕೊಳ್ಳುವುದು. ಸದರಿ ನೋಂದಣಿ ಸಂಖ್ಯೆಯ ಮೂಲಕ 'ಆನ್‌ಲೈನ್ ನಲ್ಲಿ ಸಲ್ಲಿಸಲು ಇಲ್ಲಿ ಕ್ಲಿಕ್ ಮಾಡಿ' ಗುಂಡಿಯನ್ನು ಒತ್ತಿ ಅರ್ಜಿಯನ್ನು ಸಲ್ಲಿಸುವುದು.
5. ಭರ್ತಿ ಮಾಡಿದ ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸುವ ಮುನ್ನ ಸೂಚನೆಗಳನ್ನು ತಪ್ಪದೇ ಓದಿಕೊಂಡು ಒಪ್ಪಿಕೊಂಡಿರಬೇಕು.

6. ಅಭ್ಯರ್ಥಿಗಳು ತನ್ನ ಇತ್ತೀಚಿನ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಬೇಕು.
   - ಭಾವಚಿತ್ರದ ಅಳತೆ (ಪಾಸ್ ಪೋರ್ಟ್ ಅಳತೆ) (ಗರಿಷ್ಠ ಅಳತೆ : 100 KB)
   - ಸಹಿಯ ಅಳತೆ (ಗರಿಷ್ಠ ಅಳತೆ : 100 KB)
7. ಅಧಿಸೂಚನೆಯಲ್ಲಿನ ಹುದ್ದೆಗೆ ಅಭ್ಯರ್ಥಿಯ ಅರ್ಹತೆಯನ್ನು ಉಪಕರಣವು ಪರಿಶೀಲಿಸುತ್ತದೆ. ಅರ್ಹತಾ ಷರತ್ತುಗಳನ್ನು ಪೂರೈಸುವ ಅಭ್ಯರ್ಥಿಯ ಅರ್ಜಿಯನ್ನು ಮಾತ್ರ ಉಪಕರಣದಿಂದ ಸ್ವೀಕರಿಸಲ್ಪಡುತ್ತದೆ.
8. ಮೀಸಲಾತಿಯನ್ನು ಕೋರಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಿಸಿದ ಮೀಸಲಾತಿ ಪ್ರಮಾಣ ಪತ್ರಗಳನ್ನು Pdf ಮಾದರಿಯಲ್ಲಿ (ಗರಿಷ್ಠ ಅಳತೆ : 250 KB) ಅಪ್‌ಲೋಡ್ ಮಾಡಬೇಕು.
9. ವಿದ್ಯಾರ್ಹತೆಗಳ ಎಲ್ಲಾ ಅಂಕಪಟ್ಟಿಗಳನ್ನು ಒಂದೇ ಡಾಕ್ಯುಮೆಂಟ್ ನಲ್ಲಿ ಸ್ಕ್ಯಾನ್ ಮಾಡಿ Pdf ಮಾದರಿಯಲ್ಲಿ (ಗರಿಷ್ಠ ಅಳತೆ : 2 MB) ಅಪ್‌ಲೋಡ್ ಮಾಡಬೇಕು.

10. ಅರ್ಜಿಯನ್ನು ಅಂತಿಮವಾಗಿ ಸಲ್ಲಿಸಿದ ನಂತರ ಯಾವುದೇ ತಿದ್ದುಪಡಿಗಳನ್ನು ಮಾಡಲು ಅವಕಾಶವಿಲ್ಲದ ಪ್ರಯುಕ್ತ ಅಭ್ಯರ್ಥಿಗಳು ಅಂತಿಮವಾಗಿ ಅರ್ಜಿಯನ್ನು ಸಲ್ಲಿಸುವ ಮುನ್ನ ಎಲ್ಲಾ ಅಗತ್ಯ ವಿವರಗಳನ್ನು ಭರ್ತಿ ಮಾಡಲಾಗಿದೆಯೇ ಎಂದು ಖಚಿತಪಡಿಸಿಕೊಂಡು ನಂತರ ಅರ್ಜಿ ಶುಲ್ಕವನ್ನು ಪಾವತಿಸಬೇಕು. ಅಭ್ಯರ್ಥಿಗಳು ಮಾಹಿತಿಗಾಗಿ ಅರ್ಜಿ ಸಲ್ಲಿಸಿದ ನಂತರ ಅದರ ಒಂದು ಪ್ರತಿಯನ್ನು ತಪ್ಪದೇ ಪ್ರಿಂಟ್ ತೆಗೆದುಕೊಳ್ಳುವುದು.
11. ನಿಗದಿತ ಅರ್ಜಿ ಶುಲ್ಕಗಳನ್ನು ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
12. ಅರ್ಜಿ ಶುಲ್ಕವನ್ನು ಈ ಕೆಳಕಂಡ ಮಾದರಿಯಲ್ಲಿ ಪಾವತಿಸಬಹುದು.
    - ನೆಟ್ ಬ್ಯಾಂಕಿಂಗ್
    - ಡೆಬಿಟ್ ಕಾರ್ಡ್
    - ಕ್ರೆಡಿಟ್ ಕಾರ್ಡ್
    - ಯುಪಿಐ

## ಅರ್ಜಿ ಸಲ್ಲಿಸುವ ಪ್ರಕ್ರಿಯೆ

ಅರ್ಜಿ ಸಲ್ಲಿಸುವ ಪ್ರಕ್ರಿಯೆಯಲ್ಲಿ ಮೂರು ಹಂತಗಳಿವೆ.
ಮೊದಲನೇ ಹಂತ :Registration
ಎರಡನೇ ಹಂತ :Application Submission
ಮೂರನೇ ಹಂತ :Payment

(* ಗುರುತುಇರುವ ಅಂಕಣಗಳನ್ನು ಕಡ್ಡಾಯವಾಗಿ ಭರ್ತಿ ಮಾಡಬೇಕು)

ನೋಂದಣಿ ಹಾಗೂ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆಗಳು ಉಂಟಾದಲ್ಲಿ ಸಹಾಯವಾಣಿ ಸಂಖ್ಯೆ : 9019022612 ಗೆ ಕರೆ ಮಾಡುವುದು ಹಾಗೂ e-mail : helpdesk.apexbank@gmail.com ಅನ್ನು ಸಂಪರ್ಕಿಸಲು ಸೂಚಿಸಿದೆ.